# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:10ನೇ ಮಾರ್ಚ್, 2025**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 03. ಶೂನ್ಯವೇಳೆ ಪ್ರಸ್ತಾವಗಳು

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ, 2025ನ್ನು ಸಭೆಯ ಮುಂದಿಡುವುದು.**

### 05. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಬೆಂಗಳೂರು ಅರಮನೆ(ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ, 2025

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಬೆಂಗಳೂರು ಅರಮನೆ(ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಹದಿಹರೆಯದ ಮಕ್ಕಳು ಎದುರಿಸುತ್ತಿರುವ ಕೆಳಕಂಡ ಸಾಮಾನ್ಯ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳ ಬಗ್ಗೆ ವಿಶೇಷ ಚರ್ಚೆ.

1. ಸ್ವಾಭಿಮಾನ ಮತ್ತು ದೇಹದ ಚಿತ್ರಣ
2. ಒತ್ತಡ
3. ಬೆದರಿಸುವಿಕೆ
4. ಖಿನ್ನತೆ
5. ಸೈಬರ್ ವ್ಯಸನ
6. ಮದ್ಯಪಾನ ಮತ್ತು ಧೂಮಪಾನ
7. ಹದಿಹರೆಯದ ವಯಸ್ಸಿನಲ್ಲಿ ಗರ್ಭಧಾರಣೆ
8. ಅಪ್ರಾಪ್ತ ವಯಸ್ಕರ ಲೈಂಗಿಕತೆ
9. ಪ್ರತಿಭಟನೆಯ ನಡವಳಿಕೆಗಳು
10. ಸಮಾನಸ್ಕರ ಒತ್ತಡ ಮತ್ತು ಸ್ಪರ್ಧೆ

## 07. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಕುಶಾಲಪ್ಪ ಎಂ.ಪಿ.(ಸುಜಾ), ಎಸ್.ಎಲ್. ಭೋಜೇಗೌಡ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ, ಡಿ.ಎಸ್. ಅರುಣ್ ಮತ್ತು ಡಾ: ಧನಂಜಯ ಸರ್ಜಿ** ಅವರುಗಳು ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಸರ್ಕಾರ ಇತ್ತೀಚೆಗೆ ಕೊಡಗು ವಿಶ್ವವಿದ್ಯಾಲಯವನ್ನು ಮುಚ್ಚಲು ತೀರ್ಮಾನಿಸಿರುವುದನ್ನು ಕೈಬಿಡಬೇಕೆಂದು ಹಾಗೂ ವಿದ್ಯಾರ್ಥಿಗಳ ಮತ್ತು ನಿರುದ್ಯೋಗಿಗಳ ಹಿತದೃಷ್ಠಿಯಿಂದ ಸದರಿ ವಿಶ್ವವಿದ್ಯಾಲಯವನ್ನು ಅಭಿವೃದ್ಧಿಪಡಿಸಲು ಅನುದಾನವನ್ನು ಒದಗಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

02. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಆನೇಕಲ್ ತಾಲ್ಲೂಕಿನಲ್ಲಿ ಹಾಗೂ ಸರ್ಜಾಪುರ ಹೋಬಳಿಯಲ್ಲಿ ಹೊಸ ಕೈಗಾರಿಕೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ಪ್ರದೇಶವನ್ನು ಹಿಂಪಡೆಯುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಂ. ನಾಗರಾಜು** ಅವರು "ಕಾಡುಗೊಲ್ಲ" ಜನಾಂಗವನ್ನು ಹಿಂದುಳಿದ ವರ್ಗಗಳ ಪ್ರವರ್ಗ-ಎ ಮತ್ತು ಬಿ ಅಡಿಯಲ್ಲಿ ಸೇರ್ಪಡೆಗೊಳಿಸಿ ಆದೇಶಿಸಲಾಗಿದ್ದು, ಜಾತಿ ಪ್ರಮಾಣ ಪತ್ರ ನೀಡಲು ವಿಳಂಬವಾಗುತ್ತಿರುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

**08. ನಿಯಮ 330ರ ಮೇರೆಗೆ ಪ್ರಸ್ತಾಪಿಸಲಾದ ವಿಷಯದ ಮೇಲೆ ಸರ್ಕಾರದಿಂದ ಉತ್ತರ**

**ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಸಿ.ಟಿ. ರವಿ, ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಇತರರು** ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿರುವ ಕೆ.ಎ.ಎಸ್. ಪರೀಕ್ಷೆಯಲ್ಲಿ ಆಗುತ್ತಿರುವ ತಪ್ಪುಗಳಿಂದಾಗಿ ಅಭ್ಯರ್ಥಿಗಳು ಆತಂಕಕ್ಕೀಡಾಗಿರುವ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ.

**09. ನಿಯಮ 330ರ ಮೇರೆಗೆ**

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಡಾ: ತಳವಾರ್ ಸಾಬಣ್ಣ, ಶೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ವೈ.ಎಂ. ಸತೀಶ್** ಅವರುಗಳು ರಾಜ್ಯದಲ್ಲಿ 2024-25ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಬೆಳೆಗಳ ಅತಿವೃಷ್ಠಿ, ಅನಾವೃಷ್ಠಿ ಮತ್ತು ನೆಟೆ ರೋಗದಿಂದ ತೊಗರಿ ಬೆಳೆ ನಾಶವಾಗಿದ್ದು, ರೈತರು ಸಂಕಷ್ಟಕ್ಕೀಡಾಗಿರುವುದರಿಂದ ತೊಗರಿ ಬೆಳೆಗಾರರಿಗೆ ಬೆಂಬಲ ಬೆಲೆ ನಿಗದಿಪಡಿಸಿ ಕೂಡಲೇ ಪರಿಹಾರ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ಗ್ರಾಹಕರು ಸಾಲಪಡೆದಿದ್ದಾರೆನ್ನುವಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ರಾಮೋಜಿಗೌಡ** ಅವರು ಉನ್ನತ ಶಿಕ್ಷಣ ಪಡೆದು ಪ್ರಾಥಮಿಕ ಶಾಲೆಗಳಲ್ಲಿ ನಿವೃತ್ತಿಯ ಅಂಚಿನಲ್ಲಿರುವ 58 ಸಾವಿರ ಶಿಕ್ಷಕರುಗಳಿಗೆ ಸೇವಾ ಹಿರಿತನದ ಮೇರೆಗೆ ನಿಗದಿತ ಅವಧಿಯಲ್ಲಿ ಮುಂಬಡ್ತಿ ನೀಡುವ ಕುರಿತು ಪ್ರಸ್ತಾಪಿಸುವುದು.

**10. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ**

"2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:04.03.2025ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

ನಾಲ್ಕನೇ ದಿನ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**